ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ನಿರುದ್ಯೋಗಿ ವೈದ್ಯರುಗಳನ್ನು ನೇಮಕಾತಿ ಮಾಡಿಕೊಳ್ಳುವ ಬಗ್ಗೆ

ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

20 (88) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಮುಗಿಸಿ ಉದ್ಯೋಗಕ್ಕಾಗಿ ಕಾಯುತ್ತಿರುವವರ ಸಂಖ್ಯೆ ಎಷ್ಟು; ಲಕ್ಷಾಂತರ ರೂಪಾಯಿ ಸಾಲ ಮಾಡಿ ಶಿಕ್ಷಣ ಪಡೆದ ಯುವಕ ಯುವತಿಯರು ನಿರುದ್ಯೋಗಿಗಳಾಗಿದ್ದು ಆರ್ಥಿಕ ಸಂಕಷ್ಟದಲ್ಲಿರುವುದರಿಂದ ಉದ್ಯೋಗಗಳನ್ನು ಸೃಷ್ಟಿಸಿ ಇವರನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ;

(ಆ) ವೈದ್ಯರ ಕೊರತೆಯಿರುವ ಈ ಸಂದರ್ಭದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಹೊಸದಾಗಿ ವೈದ್ಯರುಗಳನ್ನು ಎಷ್ಟು ದಿವಸಗಳಲ್ಲಿ ನೇಮಕಾತಿ ಮಾಡಲಾಗುವುದು;

(ಇ) ವಿಶೇಷ ನೇಮಕಾತಿಗಳನ್ನು ಮಾಡಲು ಯಾವುದಾದರೂ ಕಾರ್ಯಕ್ರಮ ಕೈಗೊಳ್ಳಲಾಗುವುದೇ?